**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.2200/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಕೌಶಿಕ್ ಬಿ.ಸಿ. | ಪ್ರಾಸಾ-6 |
| ತಂದೆಯ ಹೆಸರು | : ಚಂದ್ರಶೇಖರ್ | ಚಾಸಾ-8 |
| ವಯಸ್ಸು | : 35 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಪಿ.ಎಸ್.ಐ | ದಿನಾಂಕಃ 06.03.2026. |
| ವಾಸಸ್ಥಳ | : ಉಪ್ಪಿನಂಗಡಿ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಃಜ್ಞ್ಯಾಸ.ಸ.ಅ. ರವರಿಂದ:**

ನಾನು ಫೆಬ್ರವರಿ 2024 ರಿಂದ ಜುಲೈ 2024 ರವರೆಗೂ ಬಣಕಲ್ ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.14.02.2024 ರಂದು ಚಾಸಾ-7 ರವರಿಂದ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಪಡೆದುಕೊಂಡಿರುತ್ತೇನೆ. ಚಾಸಾ-5 ರವರಿಗೆ ಚಾಸಾ-1 ರವರಿಗೆ ಅಂಗಡಿಯನ್ನು ನಡೆಸಲು ಪರವಾನಿಗೆಯನ್ನು ನೀಡುರುವ ಕುರಿತು ದಾಖಲಾತಿಯನ್ನು ಕೋರಿರುತ್ತೇನೆ. ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಯ ಸಂಬಂಧ ಚಾಸಾ-9 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿಯು ಚಾಸಾ-5 ರವರಿಗೆ ನೀಡಿದ ಮನವಿ ಪ್ರತಿಯನ್ನು ನಿಪಿ-10 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು: ಆರೋಪಿ ಪರ ಶ್ರೀ ಡಿ.ಎಸ್. ವಕೀಲರ ಪರವಾಗಿ, ಶ್ರೀ ಎನ್.ಸಿ. ವಕೀಲರಿಂದ:**

ನಾನು ಕೃತ್ಯ ನಡೆದ ಸ್ಥಳದ ದಾಖಲಾತಿಯನ್ನು ಕೋರಿ ಚಾಸಾ-5 ರವರಿಗೆ ಮನವಿಯನ್ನು ಮಾಡಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-10 ನ್ನು ಈ ಪ್ರಕರಣಕ್ಕಾಗಿ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಮನವಿ ಪತ್ರದಲ್ಲಿ ಚಾಸಾ-1 ರವರಿಗೆ ಸೇರಿದ ಅಂಗಡಿಯು ರಸ್ತೆ ಬದಿಯಲ್ಲಿ ಇದೆಯಾ ಎಂದು ಕೇಳಿರುವುದಿಲ್ಲ ಎಂದರೆ ಸರಿಯಲ್ಲ. ನಾನು ನನ್ನ ಮೇಲಾಧಿಕಾರಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ-1 ರವರಿಗೆ ಸಂಬಂಧಿಸಿದ ಅಂಗಡಿಯು ಯಾವ ಸರ್ವೇ ನಂಬರ್ ನಲ್ಲಿ ಇದೆ ಎಂಬುದರ ಬಗ್ಗೆ ಮಾಹಿತಿಯನ್ನು ಕೇಳಿರುವುದಿಲ್ಲ ಎಂದರೆ ಸರಿ. ನಾನು ಕೃತ್ಯ ನಡೆದ ಸ್ಥಳವನ್ನು ಕುದ್ದಾಗಿ ನೋಡಿ ಪರಿಶೀಲಿಸಿರುವುದಿಲ್ಲ ಎಂದರೆ ಸರಿಯಲ್ಲ. ಆ ರೀತಿಯಾಗಿ ಹೋಗಿದ್ದರೆ ನಾನು ದಾಖಲಾತಿಯನ್ನು ಹಾಜರುಪಡಿಸುತ್ತಿದ್ದೆ ಎಂದರೆ ಸಾಕ್ಷಿಯು ತನಿಖೆಗೆ ಅವಶ್ಯಕತೆ ಇರುವುದಿಲ್ಲ ಎಂದು ನುಡಿಯುತ್ತಾರೆ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ

ಸರಿಯಲ್ಲ.

**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.2200/2024**

| | | |
|---|---|---|
| ಸಾಕ್ಷಿದಾರರ ಹೆಸರು | : ರೇಣುಕಾ ಡಿ.ವಿ | ಪ್ರಾಸಾ-7 |
| ಗಂಡನ ಹೆಸರು | : ಜಗದೀಶ್ ಎಸ್.ಜಿ | ಚಾಸಾ-9 |
| ವಯಸ್ಸು | : 49 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಪಿ.ಎಸ್.ಐ | ದಿನಾಂಕಃ 06.03.2026. |
| ವಾಸಸ್ಥಳ | : ಬಣಕಲ್ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನಾನು ನವೆಂಬರ್ 2023 ರಿಂದ ಜನವರಿ 2024 ರವರೆಗೂ ಮತ್ತು ಜೂನ್ 2024 ರಿಂದ ಇಲ್ಲಿಯವರೆಗೂ ಬಣಕಲ್ ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.26.06.2024 ರಂದು ಪ್ರಕರಣದ ಕಡತವನ್ನು ಚಾಸಾ-8 ರವರಿಂದ ಸ್ವೀಕರಿಸಿಕೊಂಡಿರುತ್ತೇನೆ. ಅದೇ ದಿನ ಕೃತ್ಯ ನಡೆದ ಸ್ಥಳದ ದಾಖಲಾತಿಯನ್ನು ಚಾಸಾ-5 ರವರಿಂದ ಸ್ವೀಕರಿಸಿಕೊಂಡಿರುತ್ತೇನೆ. ದಿ.24.11.2024 ರಂದು ಆರೋಪಿಯ ವಿರುದ್ಧ ಆರೋಪವು ಸಾಬೀತಾದ ಕಾರಣ ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿಕೊಂಡಿರುತ್ತೇನೆ.

ಸಾಕ್ಷಿಯು ಚಾಸಾ-5 ರವರಿಂದ ಸ್ವೀಕರಿಸಿಕೊಂಡ ವರದಿಯನ್ನು ನಿಪಿ-11 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು: ಆರೋಪಿ ಪರ ಶ್ರೀ ಡಿ.ಎಸ್. ವಕೀಲರ ಪರವಾಗಿ, ಶ್ರೀ ಎನ್.ಸಿ. ವಕೀಲರಿಂದ:**

ದಿ.26.06.2024 ರಂದು ಪ್ರಕರಣದ ಕಡತವನ್ನು ಚಾಸಾ-8 ರವರಿಂದ ಪಡೆದುಕೊಂಡು ಅದೇ ದಿನ ಚಾಸಾ-5 ರವರಿಂದ ಕೃತ್ಯ ನಡೆದ ಸ್ಥಳದ ದಾಖಲಾತಿಯನ್ನು ಪಡೆದುಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಅಂತಿಮ ವರದಿಯನ್ನು ಸಲ್ಲಿಸುವ ಪೂರ್ವದಲ್ಲಿ ಕಡತದಲ್ಲಿದ್ದ ದಾಖಲಾತಿಗಳನ್ನು ಕೂಲಂಕುಶವಾಗಿ ಪರಿಶೀಲಿಸಿರುತ್ತೇನೆ ಎಂದರೆ ಸರಿ. ಕೃತ್ಯ ದಿ.08.02.2024 ರಂದು ನಡೆದಿರುತ್ತದೆ ಮತ್ತು ದಿ.12.02.2024 ರಂದು ಮಹಜರ್ ನ್ನು ಜರುಗಿಸಲಾಗಿರುತ್ತದೆ ಎಂದರೆ ಸರಿ. ನಿಪಿ-3 ರಿಂದ 6 ನ್ನು ಒಂದೇ ದಿನ ತೆಗೆಯಲಾಗಿರುತ್ತದೆ ಎಂದರೆ ಸರಿ. ನಿಪಿ-3 ರಿಂದ 5 ರಲ್ಲಿ ಅಂಗಡಿಯಲ್ಲಿರುವ ವಸ್ತುಗಳು ಚೆಲ್ಲಾಪಿಲ್ಲಿಯಾಗಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-6 ರಲ್ಲಿ ವಸ್ತುಗಳು ಚೆಲ್ಲಾಪಿಲ್ಲಿಯಾಗಿ ಬಿದ್ದಿರುವುದು ಕಂಡುಬರುತ್ತದೆ ಎಂದರೆ ಸರಿ. ಈ ಪ್ರಕರಣಕ್ಕೆ ಸಹಾಯವಾಗುವಂತೆ ವಸ್ತುಗಳನ್ನು ಚೆಲ್ಲಾಪಿಲ್ಲಿ ಮಾಡಿ ನಿಪಿ-6 ರ ಫೋಟೋವನ್ನು ತೆಗೆಯಲಾಗಿರುತ್ತದೆ ಎಂದರೆ ಸರಿಯಲ್ಲ. ಒಂದು ವೇಳೆ ವಸ್ತುಗಳು ಚೆಲ್ಲಾಪಿಲ್ಲಿಯಾಗಿದ್ದಲ್ಲಿ ನಿಪಿ-3 ರಿಂದ 5 ರಲ್ಲಿಯೂ ಸಹಾ ಅದೇ ರೀತಿಯಾಗಿ

ಕಂಡುಬರುತ್ತಿತ್ತು ಎಂದರೆ ಸರಿಯಲ್ಲ. ಆರೋಪಿಯ ವಿರುದ್ದ ಆರೋಪವು ಸಾಬೀತಾಗದೇ ಇದ್ದರು ಸುಳ್ಳು ದೋ.ಪ.ಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.